# ರಾಜಧಾನಿಗೆ ರಾಜಕಳೆ

## ಬೆಂಗಳೂರಿನ ಸರ್ವತೋಮುಖ ಅಭಿವೃದ್ಧಿಗೆ ಆದ್ಯತೆ । ಇನ್ನೆರಡು ವರ್ಷಗಳಲ್ಲಿ ಎಲ್ಲ ಯೋಜನೆ ಪೂರ್ಣ । ಅನುದಾನದ ಸಮಸ್ಯೆಯಾಗದಂತೆ ಅಗತ್ಯ ಕ್ರಮ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು 18/12/20

ದೇಶದ ಸಿಲಿಕಾನ್ ವ್ಯಾಲಿ ಎನಿಸಿಕೊಂಡಿರುವ ಬೆಂಗಳೂರಿನಲ್ಲಿರುವ ನ್ಯೂನತೆಗಳನ್ನು ಸರಿಪಡಿಸಿ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಮತ್ತಷ್ಟು ಹೆಸರು ಪಡೆಯುವ ಉದ್ದೇಶದಿಂದ ರಾಜ್ಯ ಸರಕಾರ ಬೆಂಗಳೂರು ಮಿಷನ್-2022 ಜಾರಿಗೊಳಿಸಿದೆ.

ವಿಧಾನಸೌಧದಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಗುರುವಾರ ಈ ಯೋಜನೆಗೆ ಚಾಲನೆ ನೀಡಿದ್ದು, ಇನ್ನೆರಡು ವರ್ಷಗಳಲ್ಲಿ ಬೆಂಗಳೂರಿನ ಸರ್ವತೋಮುಖ ಅಭಿವೃದ್ಧಿಗೆ ರಾಜ್ಯ ಸರಕಾರ ಹಾಕಿಕೊಂಡಿರುವ ಯೋಜನೆಗಳನ್ನು ಸಾಕಾರಗೊಳಿಸಿ, ಬೆಂಗಳೂರನ್ನು ಇನ್ನಷ್ಟು ಸುಂದರಗೊಳಿಸುವ ನಿಟ್ಟಿನಲ್ಲಿ ಒಂದು ಹೆಜ್ಜೆ ಇಟ್ಟಿದೆ.

ತ್ವರಿತವಾಗಿ ಬೆಳೆಯುತ್ತಿರುವ ಹಾಗೂ ಜಾಗತಿಕ ಮಟ್ಟದಲ್ಲಿ ತನ್ನದೇ ಆದ ಛಾಪು ಮೂಡಿಸುತ್ತಿರುವ ಬೆಂಗಳೂರನ್ನು ವ್ಯವಸ್ಥಿತವಾಗಿ ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಸರಕಾರ ಈ ಯೋಜನೆ ಹಾಕಿಕೊಂಡಿದ್ದು, ಮುಂದಿನ ಎರಡು ವರ್ಷಗಳಲ್ಲಿ ಪೂರ್ಣಗೊಳ್ಳಲಿದೆ.

**ಅನುದಾನದ ಸಮಸ್ಯೆ ಇಲ್ಲ:** ಯೋಜನೆಗೆ ಚಾಲನೆ ನೀಡಿದ ಬಳಿಕ ನಡೆದ ಮಾಧ್ಯಮ ಸಂವಾದದಲ್ಲಿ ಬಹುತೇಕರು ಈ ಬೃಹತ್ ಯೋಜನೆಗೆ ಯಾವ ರೀತಿ ಅನುದಾನ ಕ್ರೋಢೀಕರಣ ಮಾಡುತ್ತಾರೆ ಎನ್ನುವ ಪ್ರಶ್ನೆಯನ್ನು ಸರಕಾರದ ಮುಂದಿಟ್ಟರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಯಡಿಯೂರಪ್ಪ ಅವರು, 'ಯಾವುದೇ ರೀತಿಯ ಅನುದಾನದ ಸಮಸ್ಯೆಯಾಗದ ರೀತಿಯಲ್ಲಿ ಎಚ್ಚರ ವಹಿಸಲಾಗುವುದು. ಮುಂದಿನ ಬಜೆಟ್‌ನಲ್ಲಿ ಈ ಯೋಜನೆಗೆ ಅಗತ್ಯವಿರುವ ಅನುದಾನ ನೀಡಲಾಗುವುದು' ಎಂದು ಭರವಸೆ ನೀಡಿದರು.



> ಬೆಂಗಳೂರಿನ ಸರ್ವತೋಮುಖ ಅಭಿವೃದ್ಧಿಗೆ ಸರ್ವಪ್ರಯತ್ನ ಮಾಡಲಾಗುವುದು. ಮಿಷನ್ ಬೆಂಗಳೂರಿನ ಪ್ರಗತಿಯನ್ನು ಆರು ತಿಂಗಳಿಗೊಮ್ಮೆ ಜನರ ಮುಂದಿಡುವ ಕೆಲಸವನ್ನು ಮಾಡುತ್ತೇವೆ. ಈ ಯೋಜನೆಗೆ ಅಗತ್ಯ ಅನುದಾನವನ್ನು ಬಜೆಟ್‌ನಲ್ಲಿ ಮೀಸಲಿಡಲಾಗುವುದು.
>
> -ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ

### ಪ್ರಮುಖಾಂಶಗಳೇನು?

- ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಕ್ರಮ
- ತ್ಯಾಜ್ಯ ನಿರ್ವಹಣೆಯಲ್ಲಿ ಪದೇ ಪದೆ ಎಡವುತ್ತಿರುವುದನ್ನು ತಪ್ಪಿಸಲು ಸ್ವಚ್ಛ ಬೆಂಗಳೂರು ಯೋಜನೆ
- ಉದ್ಯಾನ ನಗರಿಯಾಗಿದ್ದ ಬೆಂಗಳೂರಿನಲ್ಲಿ ಪುನಃ ವೃಕ್ಷಗಳನ್ನು ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಗೆ ಒತ್ತು
- ರಾಜಧಾನಿಯಲ್ಲಿರುವ 1.25 ಕೋಟಿ ಜನರ ಕುಂದುಕೊರತೆ ಆಲಿಸಲು ಹಾಗೂ ಅಗತ್ಯ ಸೇವೆಗಳಿಗಾಗಿ ಆ್ಯಪ್ ಅಭಿವೃದ್ಧಿ
- 12 ಅತಿ ದಟ್ಟಣೆಯ ರಸ್ತೆಗಳನ್ನು ಗುರುತಿಸಿರುವ ಸರಕಾರ, ಈ ರಸ್ತೆಗಳನ್ನು ಮೇಲ್ದರ್ಜೆಗೆ ಏರಿಸಲು ನಿರ್ಧರಿಸಿದೆ
- ಸಮನ್ವಯ ಹೊಂದಿದ ಸಿಗ್ನಲ್ ದೀಪಗಳ ಅಳವಡಿಕೆ, ಕಾರಿಡಾರ್ ನಿರ್ಮಾಣ
- ಹಸಿರು ಬೆಂಗಳೂರು ಯೋಜನೆಯಲ್ಲಿ ನಗರದ ಹೊರವಲಯದಲ್ಲಿ 400 ಎಕರೆಗೂ ಹೆಚ್ಚು ಪ್ರದೇಶದಲ್ಲಿ ಬೃಹತ್ ವೃಕ್ಷೋದ್ಯಾನ ಅಭಿವೃದ್ಧಿ